ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ದಿಗ್ಗೇವಾಡಿ ಗ್ರಾಮ ಪಂಚಾಯತಿಯನ್ನು ವಿಭಜಿಸಿ ಯಡ್ರಾಂವ ಗ್ರಾ.ಪಂ.ಯನ್ನು ರಚಿಸುವ ಬಗ್ಗೆ.

ಓದಲಾಗಿದೆ: ಬೆಳಗಾವಿ ಜಿಲ್ಲಾಧಿಕಾರಿಗಳ ಪತ್ರ ಸಂಖ್ಯೆ: ಚುಶಾ/ಇಎಲ್‌ಎನ್/ಸಿಆರ್-86/2014-15, ದಿನಾಂಕ 24.07.2015.

ಪ್ರಸ್ತಾವನೆ:

ಮೇಲೆ ಓದಲಾದ ಬೆಳಗಾವಿ ಜಿಲ್ಲಾಧಿಕಾರಿಗಳ ಪತ್ರದಲ್ಲಿ, ರಾಯಭಾಗ ತಾಲ್ಲೂಕಿನ 19-ದಿಗ್ಗೇವಾಡಿ ಗ್ರಾಮ ಪಂಚಾಯತಿಯನ್ನು ವಿಭಜಿಸಿ ಯಡ್ರಾಂವ ಗ್ರಾ.ಪಂ.ಯನ್ನು ರಚಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. 2011 ರ ಜನಗಣತಿಯ ಪ್ರಕಾರ ದಿಗ್ಗೇವಾಡಿ ಗ್ರಾಮ ಪಂಚಾಯತಿಯಿಂದ ಯಡ್ರಾಂವ ಗ್ರಾಮವನ್ನು ವಿಭಜಿಸಿ, ಯಡ್ರಾಂವ ಗ್ರಾಮ ಪಂಚಾಯತಿಯನ್ನು ಹೊಸದಾಗಿ ರಚಿಸಿದಲ್ಲಿ, ದಿಗ್ಗೇವಾಡಿ ಗ್ರಾಮ ಪಂಚಾಯತಿಯ ಜನಸಂಖ್ಯೆ 4617 ಹಾಗೂ ಯಡ್ರಾಂವ ಗ್ರಾಮ ಪಂಚಾಯತಿಯ ಜನಸಂಖ್ಯೆ 2874 ಆಗಿರುತ್ತದೆ.

ದಿಗ್ಗೇವಾಡಿ ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನದಿಂದ ಯಡ್ರಾಂವ ಗ್ರಾಮವು ಸುಮಾರು 08 ಕಿ.ಮೀ. ದೂರ ಇದ್ದು, ಸಾರ್ವಜನಿಕರು ತಮ್ಮ ಕೆಲಸ ಕಾರ್ಯಗಳಿಗೆ ಸಂಚರಿಸಲು ತುಂಬಾ ಕಷ್ಟವಾಗುತ್ತಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಹಾಗೂ ಸಾರ್ವಜನಿಕರ ಅಭಿಪ್ರಾಯದ ಮೇರೆಗೆ ಯಡ್ರಾಂವ ಗ್ರಾಮವನ್ನು ದಿಗ್ಗೇವಾಡಿ ಗ್ರಾಮ ಪಂಚಾಯತಿಯಿಂದ ಪ್ರತ್ಯೇಕಿಸಿ, ಹೊಸ ಗ್ರಾಮ ಪಂಚಾಯತಿಯನ್ನಾಗಿ ರಚಿಸಲು ದಿನಾಂಕ 13.10.2014 ರಂದು ದಿಗ್ಗೇವಾಡಿ ಗ್ರಾಮ ಪಂಚಾಯತಿಯಲ್ಲಿ ಸರ್ವಾನುಮತದಿಂದ ಠರಾವು ಮಾಡಿರುವುದಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ತಿಳಿಸಿರುವುದಾಗಿ ಜಿಲ್ಲಾಧಿಕಾರಿಗಳು ತಮ್ಮ ಪ್ರಸ್ತಾವನೆಯಲ್ಲಿ ತಿಳಿಸಿರುತ್ತಾರೆ.

ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ದಿಗ್ಗೇವಾಡಿ ಗ್ರಾಮ ಪಂಚಾಯತಿಯಿಂದ ಯಡ್ರಾಂವ ಗ್ರಾಮವನ್ನು ಪ್ರತ್ಯೇಕಿಸಿ, ಯಡ್ರಾಂವ ಗ್ರಾಮ ಪಂಚಾಯತಿಯನ್ನು ರಚಿಸಬೇಕಾಗಿದೆ. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಒಳಪಟ್ಟು, ಜಿಲ್ಲಾಧಿಕಾರಿಗಳು ಒಂದು ಗ್ರಾಮವನ್ನು ಅಥವಾ ಗ್ರಾಮಗಳ ಗುಂಪನ್ನು ಒಳಗೊಂಡಿರುವ ಯಾವುದೇ ಪ್ರದೇಶವನ್ನು ಪಂಚಾಯತಿ ಪ್ರದೇಶವೆಂದು ಘೋಷಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಅದ್ದರಿಂದ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ದಿಗ್ಗೇವಾಡಿ ಗ್ರಾಮ ಪಂಚಾಯತಿಯಿಂದ ಯಡ್ರಾಂವ ಗ್ರಾಮವನ್ನು ಪ್ರತ್ಯೇಕಿಸಿ ಯಡ್ರಾಂವ ಗ್ರಾಮ ಪಂಚಾಯತಿಯನ್ನು ರಚಿಸಲು ಸರ್ಕಾರದ ವಿಶೇಷ ಆದೇಶ ಹೊರಡಿಸಬಹುದಾಗಿದೆ. ಅದರಂತೆ ಕೆಳಕಂಡ ಆದೇಶ.

.. 2

## ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 724 ಗ್ರಾಪಂಅ 2015

## ಬೆಂಗಳೂರು, ದಿನಾಂಕ: 20.10.2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4(1) ರನ್ವಯ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ದಿಗ್ಗೇವಾಡಿ ಗ್ರಾಮ ಪಂಚಾಯತಿಯಿಂದ ಯಡ್ರಾಂವ ಗ್ರಾಮವನ್ನು ಪ್ರತ್ಯೇಕಿಸಿ, ಯಡ್ರಾಂವ ಗ್ರಾಮ ಪಂಚಾಯತಿಯನ್ನು ಹೊಸದಾಗಿ ರಚಿಸಲು ಸರ್ಕಾರ ಆದೇಶಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆ.ಟಿ.ಸಂಖ್ಯೆ ಆಇ 408 ವೆಚ್ಚ-6/2015, ದಿನಾಂಕ 13.10.2015 ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸ್ಸಾರ
ಮತ್ತು ಅವರ ಹೆಸರಿನಲ್ಲಿ

20/10/15

(ಸಿ.ಎಸ್.ರಾಜಶೇಖರೇಗೌಡ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ-ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ, 100 ಪ್ರತಿಗಳನ್ನು ಉಪನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಗೆ ಒದಗಿಸಲು ಕೋರಿದೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಪ್ರಾದೇಶಿಕ ಆಯುಕ್ತರು, ಬೆಳಗಾವಿ.
3. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
4. ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಕಾರ್ಯನಿರ್ವಾಹಕ ಅದಿಕಾರಿಗಳು, ತಾಲ್ಲೂಕು ಪಂಚಾಯತಿ, ರಾಯಭಾಗ. ತಾಲ್ಲೂಕು, ಬೆಳಗಾವಿ ಜಿಲ್ಲೆ.
10. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ದಿಗ್ಗೇವಾಡಿ ಗ್ರಾಮ ಪಂಚಾಯತಿ, ರಾಯಭಾಗ ತಾಲ್ಲೂಕು, ಬೆಳಗಾವಿ ಜಿಲ್ಲೆ.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ-6)/ಯೋಜನಾ ಇಲಾಖೆ.
12. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
13. ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
14. ಹೆಚ್ಚುವರಿ ಪ್ರತಿ / ಶಾಖಾ ರಕ್ಷಕ ಕಡತ.